**ಪ್ರಧಾನ ವ್ಯವಹಾರ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಸೊರಬ**

**ಸಿ ಸಿ ನಂ. 677/2023**

**ಹೆಸರು** :- **ಜಯಪ್ಪ**

**ತಂದೆಯ ಹೆಸರು** :- **ಕೆರಿಯಪ್ಪ**

**ವಯಸ್ಸು** :- **63 ವರ್ಷ**

**ಉದ್ಯೋಗ** :- **ವ್ಯವಸಾಯ**

**ಸ್ಥಳ** :- **ಓಟೂರು**

**ದಿನಾಂಕಃ 24.11.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ**

ದಿಃ 22.06.2022 ರಂದು ನನ್ನನ್ನು ಮತ್ತು ಚಾಸಾ–3 ರವರನ್ನು ಪೊಲೀಸರು ಮಹಜರ್ ಗಾಗಿ ಕರೆದಿರುತ್ತಾರೆ. ಮೃತ ಚಾಸಾ–1 ರವರು ಗಲಾಟೆಯಾದ ಸ್ಥಳವನ್ನು ತೋರಿಸಿರುತ್ತಾರೆ. ಸಂಜೆ 5.00 ಗಂಟೆಯಿಂದ 6.00 ಗಂಟೆಯವರೆಗೆ ಪಂಚನಾಮೆಯನ್ನು ಜರುಗಿಸಿರುತ್ತಾರೆ. ಸಾಕ್ಷಿ ಪಂಚನಾಮೆಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ–1 ಮತ್ತು ಸಾಕ್ಷಿಯ ಸಹಿಯನ್ನು ನಿಪಿ–1 ಎ ಎಂದು ಗುರುತಿಸಲಾಯಿತು. ಸಾಕ್ಷಿ ಎರಡು ಭಾವಚಿತ್ರಗಳನ್ನು ನೋಡಿ ಗುರುತಿಸಿದ್ದು, ಅವುಗಳಲ್ಲಿ ತಮ್ಮ ಇರುವಿಕೆಯನ್ನು ಮತ್ತು ಸದರಿ ಭಾವಚಿತ್ರಗಳನ್ನು ಘಟನಾಸ್ಥಳ ಪಂಚನಾಮೆ ಕಾಲಕ್ಕೆ ತೆಗೆದ ಭಾವಚಿತ್ರಗಳು ಎಂದು ನುಡಿದಿದ್ದು, ಅವುಗಳನ್ನು ನಿಪಿ–2 ಮತ್ತು 3 ಎಂದು ಗುರುತಿಸಲಾಯಿತು.

CC No.677/2023
CW-2 PW-1

**ಪಾಟಿ ಸವಾಲುಃ ಆರೋಪಿ ಪರ ಶ್ರೀ ಪಿ ಎಸ್ ಕೆ ವಕೀಲರಿಂದಃ**

ಮೃತ ಚಾಸಾ–1 ರವರು ನನ್ನ ಸಂಬಂಧಿಕರು ಅಂದರೆ ಸರಿ. ನಿಪಿ–1 ಪಂಚನಾಮೆಯಲ್ಲಿ ಬರೆದಿರುವ ಸಂಗತಿಗಳನ್ನು ಹೇಳಲು ಬರುವುದಿಲ್ಲ ಅಂದರೆ ಸಾಕ್ಷಿಯು ಈಗ ಹೇಳಲು ಬರುವುದಿಲ್ಲ ಎಂದು ಉತ್ತರಿಸುತ್ತಾರೆ. ಪೊಲೀಸರು ಕೋರಿಕೆಯ ಮೇರೆಗೆ ನಿಪಿ–1 ಕ್ಕೆ ಸಹಿ ಮಾಡಿರುತ್ತೀರಿ ಅಂದರೆ ಸಾಕ್ಷಿಯು ಪೋಲಿಸರು ನನಗೆ ನಿಪಿ–1 ಪಂಚನಾಮೆಯನ್ನು ನನಗೆ ಓದಿ ಹೇಳಿರುತ್ತಾರೆ. ನಂತರ ನಾನು ಸಹಿ ಮಾಡಿರುತ್ತೇನೆ. ನಿಪಿ–1 ನ್ನು ಪೊಲೀಸ ಠಾಣೆಯಲ್ಲಿ ತಯಾರಿಸಿ ಸಹಿ ಪಡೆದಿರುತ್ತಾರೆ ಅಂದರೆ ಸರಿಯಲ್ಲ. ಪಂಚನಾಮೆಗೆ ಸಹಕರಿಸುವಂತೆ ನನಗೆ ಯಾವುದೇ ನೋಟಿಸನ್ನು ನೀಡಿರುವುದಿಲ್ಲ. ಮೃತ ಚಾಸಾ–1 ರವರು ನನ್ನ ಸಂಬಂಧಿಕರಾಗಿರುವುದರಿಂದ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲಃ**

**(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ನನ್ನ ಉಕ್ತಲೇಖನದ ರೀತ್ಯಾ ಕಂಪ್ಯೂಟರೀಕರಿಸಲಾಯ್ತು).**

**ಓ.ಹೇ.ಕೇ. ಸರಿ ಇದೆ ಎಂದು ಒಪ್ಪಿದ್ದಾರೆ.**

**ಪ್ರಧಾನ ವ್ಯವಹಾರ ನ್ಯಾ ಮತ್ತು ಜೆ.ಎಂ.ಎಫ್.ಸಿ**
**ಸೊರಬ.**